ಕರ್ನಾಟಕ ಸರ್ಕಾರ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ

# ಕುವೆಂಪು ಭಾಷಾ ಭಾರತಿ ಪ್ರಾಧಿಕಾರ

ಕಲಾಗ್ರಾಮ, ಜ್ಞಾನಭಾರತಿ , ಮಲ್ಲತ್ತಹಳ್ಳಿ, ಬೆಂಗಳೂರು-560056 ದೂ: 080-23183311/ 23183312

kbbp-bengaluru@ka.gov.in www.kuvempubhashabharathi.karnataka.gov.in

---

ಕುಭಾಪ್ರಾ/128/ಪು.ಬಹು-2021/2021-22 ದಿನಾಂಕ:06.01.2022

## ಪ್ರಕಟಣೆ

ಮಾನ್ಯರೆ,

**ವಿಷಯ**: ಕುವೆಂಪು ಭಾಷಾ ಭಾರತಿ ಪ್ರಾಧಿಕಾರವು ಅನುವಾದಿತ ಪುಸ್ತಕಗಳಿಗೆ ನೀಡಲಿರುವ 2021ನೇ ಸಾಲಿನ ಪುಸ್ತಕ ಬಹುಮಾನ ಯೋಜನೆಗೆ ಪುಸ್ತಕಗಳನ್ನು ಆಹ್ವಾನಿಸಿರುವ ಕುರಿತು.

*************

ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಪುಸ್ತಕ ಬಹುಮಾನ ನೀಡಿಕೆಗೆ ಸಂಬಂಧಿಸಿದಂತೆ 2021ನೇ ಸಾಲಿನಲ್ಲಿ ಅಂದರೆ ದಿನಾಂಕ:01.01.2021 ರಿಂದ 31.12.2021ರವರೆಗಿನ ಅವಧಿಯಲ್ಲಿ ಪ್ರಥಮಾವೃತ್ತಿಯಲ್ಲಿ ಪ್ರಕಟವಾಗಿರುವ ಅನುವಾದಿತ ಪುಸ್ತಕಗಳನ್ನು ಹಾಗೂ ಅನುವಾದ ಅಧ್ಯಯನವನ್ನು ಕುರಿತ ಪುಸ್ತಕಗಳನ್ನು 2021ನೇ ಸಾಲಿನ ಪುಸ್ತಕ ಬಹುಮಾನ ನೀಡಿಕೆಗಾಗಿ ಅರ್ಹ ಅನುವಾದಕರು/ಪ್ರಕಾಶಕರಿಂದ ಆಹ್ವಾನಿಸಲಾಗಿದೆ.

*ಕನ್ನಡದಿಂದ ಇತರ ಯಾವುದೇ ಭಾಷೆಗಾಗಲೀ ಇಲ್ಲವೇ ಇತರ ಯಾವುದೇ ಭಾಷೆಯಿಂದ ಕನ್ನಡಕ್ಕೆ ಅನುವಾದಗೊಂಡಿರುವ ಪ್ರಥಮಾವೃತ್ತಿಯಲ್ಲಿ ಪ್ರಕಟಗೊಂಡಿರುವ ಕೃತಿಗಳನ್ನು ಬಹುಮಾನಕ್ಕಾಗಿ ಪರಿಗಣಿಸಲಾಗುತ್ತದೆ. 2021ರ ಸಾಲಿನಲ್ಲಿ ಅನುವಾದ ಸಾಹಿತ್ಯವನ್ನು ಕುರಿತ 'ಅಧ್ಯಯನ ಪುಸ್ತಕಗಳನ್ನು ಕೂಡ ಬಹುಮಾನಕ್ಕಾಗಿ ಪರಿಗಣಿಸಲಾಗುತ್ತದೆ. ಪ್ರಥಮಾವೃತ್ತಿಯಲ್ಲಿ 2021ನೇ ಸಾಲಿನಲ್ಲಿ ಪ್ರಕಟವಾಗಿರುವ ಅನುವಾದಿತ ಪುಸ್ತಕಗಳ ಬಗ್ಗೆ ಮಾಹಿತಿ ಇರುವವರು ಸಹ ಪುಸ್ತಕಗಳನ್ನು ಕಚೇರಿಗೆ ಕಳುಹಿಸಿಕೊಡಬಹುದಾಗಿದೆ. ಬಹುಮಾನಿತ ಕೃತಿಗಳಿಗೆ ಪ್ರಾಧಿಕಾರವು ನಿಗದಿಪಡಿಸಿದ ಮೊತ್ತವನ್ನು ಬಹುಮಾನವಾಗಿ ನೀಡಲಾಗುತ್ತದೆ.*

*ಪುಸ್ತಕ ಬಹುಮಾನಕ್ಕೆ ಪುಸ್ತಕಗಳನ್ನು ಕಳುಹಿಸುವವರು ಅನುವಾದಿತ ಪ್ರಕಟಣೆಗಳ ಪ್ರತಿ ಪುಸ್ತಕದ ನಾಲ್ಕು ಪ್ರತಿಗಳನ್ನು ಉಚಿತವಾಗಿ ರಿಜಿಸ್ಟ್ರಾರ್, ಕುವೆಂಪು ಭಾಷಾ ಭಾರತಿ ಪ್ರಾಧಿಕಾರ ಜ್ಞಾನಭಾರತಿ, ಕಲಾಗ್ರಾಮ, ಮಲ್ಲತ್ತಹಳ್ಳಿ, ಬೆಂಗಳೂರು-560056 ದೂ:23183311/12 ಕಚೇರಿಗೆ ಖುದ್ದಾಗಿ ಅಥವಾ ಅಂಚೆ/ಕೊರಿಯರ್ ಮೂಲಕ ದಿನಾಂಕ:15.02.2022ರೊಳಗಾಗಿ ತಲುಪಿಸಬೇಕೆಂದು ಈ ಮೂಲಕ ಕೋರಲಾಗಿದೆ.*

ರಿಜಿಸ್ಟ್ರಾರ್